ವಿಜಯವಾಣಿ
ಕನ್ನಡಿಗರ ಧ್ವನಿ

**Saturday 17th June 2023, Page No.02**

# RVCE: 8th Mile Techno Cultural Fest 2023 and Karnata 2023 Kannada Festival inaugurated.

ವಿಜಯವಾಣಿ ನಂ 1

## ಭಾಷೆ ಉಳಿಸುವ ಪರಂಪರೆ ಮುಂದುವರಿಕೆ ದೃಢಸಂಕಲ್ಪ

**ಯಶವಂತಪುರ:** ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆಯ ಬೆಳವಣಿಗೆಗೆ ಹಲವಾರು ಮಹನೀಯರು ಕೊಡುಗೆ ನೀಡಿದ್ದಾರೆ. ಆ ಪರಂಪರೆ ಮುಂದುವರಿಸುವ ನಿಟ್ಟಿನಲ್ಲಿ ನಾಡಿನ ಪ್ರತಿಯೊಬ್ಬರೂ ದೃಢಸಂಕಲ್ಪ ಮಾಡಬೇಕು ಎಂದು ಸಾಹಿತಿ ಡಾ. ಹಿರೇಮಗಳೂರು ಕಣ್ಣನ್ ಕರೆ ನೀಡಿದ್ದಾರೆ.

**» ಹಿರೇಮಗಳೂರು ಕಣ್ಣನ್ ಸಲಹೆ**

ಬೆಂಗಳೂರು-ಮೈಸೂರು ಮುಖ್ಯರಸ್ತೆ ಯಲ್ಲಿರುವ ಆರ್.ವಿ. ತಾಂತ್ರಿಕ ಮಹಾ ವಿದ್ಯಾಲಯ ಆವರಣದಲ್ಲಿ ಆಯೋಜಿಸಿದ್ದ 8ನೇ ಮೈಲ್ ಟೆಕ್ನೋ ಕಲ್ಚರಲ್ ಫೆಸ್ಟ್ ಮತ್ತು ಕರ್ನಾಟಕ- 2023 ಕನ್ನಡ ಹಬ್ಬಕ್ಕೆ ಚಾಲನೆ ನೀಡಿ ಮಾತನಾಡಿದರು. ತಾಂತ್ರಿಕ ವಿದ್ಯಾಲಯವಾದರೂ ಕನ್ನಡದ ಬಗ್ಗೆ ಕಳಕಳಿ ವ್ಯಕ್ತಪಡಿಸಿ, 50 ವರ್ಷಗಳ ಹಿಂದೆ ಕನ್ನಡ ಸಂಘವನ್ನು ಆರಂಭಿಸಿ ಶ್ರಮಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ. ಎಂ.ಪಿ. ಶ್ಯಾಮ್ ಮಾತನಾಡಿ, ಕಾಲೇಜಿನಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಕಲೆ, ಸಾಹಿತ್ಯ, ಸಂಸ್ಕೃತಿ ಉತ್ತಮ ವಿಚಾರ ಧಾರೆಗಳತ್ತ ಒಲವು ಮೂಡಿಸಿಕೊಳ್ಳುವ ವಾತಾವರಣ ನಿರ್ಮಾಣ ಮಾಡಲು ದೃಢ ಹೆಜ್ಜೆ ಇಟ್ಟು ಕಾರ್ಯ ನಿರ್ವಹಿಸಲಾಗುತ್ತಿದೆ ಎಂದರು. ಸಾಹಿತಿ ನಾಗಶ್ರೀ ತ್ಯಾಗರಾಜ್, ಪ್ರಾಂಶುಪಾಲ ಡಾ. ಕೆ.ಎನ್. ಸುಬ್ರಹ್ಮಣ್ಯ, ಉಪ ಪ್ರಾಂಶುಪಾಲೆ ಡಾ. ಕೆ.ಎಸ್. ಗೀತಾ, ಕಾಲೇಜು ಕನ್ನಡ ಸಂಘದ ಅಧ್ಯಕ್ಷ ಎಂ.ವಿ. ವಿಕ್ರಮ್, ರಾಜಲಕ್ಷ್ಮೀ ಮತ್ತಿತರರು ಉಪಸ್ಥಿತರಿದ್ದರು. ಹಿರೇಮಗಳೂರು ಕಣ್ಣನ್ ಹಾಗೂ ನಾಗಶ್ರೀ ತ್ಯಾಗರಾಜ್ ಅವರು ಗಾದೆ, ಹರಟೆ, ಹಾಸ್ಯದ ಮೂಲಕ ನೆರೆದ ಸಭಿಕರನ್ನು ರಂಜಿಸಿದರು.

ವಿಜಯವಾಣಿ ಚಿತ್ರ



ಆರ್.ವಿ. ಕಾಲೇಜಿನಲ್ಲಿ ಆಯೋಜಿಸಿದ್ದ ಕನ್ನಡ ಹಬ್ಬಕ್ಕೆ ಸಾಹಿತಿ ಹಿರೇಮಗಳೂರು ಕಣ್ಣನ್ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು. ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಅಧ್ಯಕ್ಷ ಡಾ. ಎಂ.ಪಿ. ಶ್ಯಾಮ್, ಪ್ರಾಂಶುಪಾಲ ಡಾ.ಕೆ.ಎನ್. ಸುಬ್ರಮಣ್ಯ ಮತ್ತಿತರರಿದ್ದರು.